ಧಾರವಾಡ ಜಿಲ್ಲೆ ಹಿರೇಕೆರೂರು ತಾಲ್ಲೂಕು ಮುನ್ಸೀಫ್ ಮತ್ತು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಕಟ್ಟಡ ಪೂರ್ಣಗೊಳಿಸುವ ಬಗ್ಗೆ

336-ಶ್ರೀ ಬಿ.ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಿರೇಕೆರೂರು ತಾಲ್ಲೂಕಿನ ಮುನ್ಸೀಫ್ ಮತ್ತು ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಕಟ್ಟಡದ ಕೆಲಸ ಪ್ರಾರಂಭಿಸಿ ಎಷ್ಟು ವರ್ಷಗಳಾದವು?

ಆ) ಸದರಿ ಕಟ್ಟಡದ ಕೆಲಸ ಯಾವ ಹಂತದಲ್ಲಿದೆ ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಐದು ವರ್ಷಗಳು

ಆ) ಸದರಿ ಕಟ್ಟಡ ಮುಕ್ತಾಯ ಹಂತದಲ್ಲಿದ್ದು, ಡಿಸೆಂಬರ್ 1994ರ ಅಂತ್ಯದೊಳಗೆ ಪೂರ್ಣಗೊಳಿಸಲು ಉದ್ದೇಶಿಸಿದೆ.

ಹುಕ್ಕೇರಿ ತಾಲ್ಲೂಕಿಗೆ ವಿದ್ಯುಚ್ಛಕ್ತಿ ಮಂಜೂರಾತಿ

101-ಶ್ರೀ ಉಮೇಶ್ .ವಿ. ಕತ್ತಿ (ಹುಕ್ಕೇರಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಕ್ಕೇರಿ ತಾಲ್ಲೂಕಿನ ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರಿ ಸಂಘದವರು ವಿದ್ಯುತ್ ಸರಬರಾಜು ಸರಿಪಡಿಸಲು 5 ಸಬ್-ಸ್ಟೇಷನ್ ಸ್ಥಾಪಿಸಲು ಸರ್ಕಾರಕ್ಕೆ ಅರ್ಜಿ ಸಲ್ಲಿಸಿರುವರೇ?

ಆ) ಹಾಗಿದ್ದಲ್ಲಿ ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡ ಕ್ರಮವೇನು?

ಶ್ರೀ ಎಸ್. ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು)

ಅ) ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರಿ ಸಂಘವು 3 ಸಬ್-ಸ್ಟೇಷನ್ ಸ್ಥಾಪಿಸಲು ಕವಿಮಂಗೆ ಅರ್ಜಿ ಸಲ್ಲಿಸಿದೆ.

ಆ) ಈ ಸಂಬಂಧ ಯೋಜನಾ ವರದಿಯನ್ನು ತಯಾರಿಸಲಾಗಿದ್ದು, ಯೋಜನಾ ವರದಿಗೆ ಮಂಡಳಿಯ ತಾಂತ್ರಿಕ ಸಮಿತಿಯ ಅನುಮೋದನೆ ದೊರಕಬೇಕಾಗುತ್ತದೆ.

ಕೊಟಬಾಗಿ ವಿತ ನೀರಾವರಿ ಯೋಜನೆ

104-ಶ್ರೀ ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಟಬಾಗಿ ವಿತ ನೀರಾವರಿ ಯೋಜನೆ ಮಂಜೂರಾದದ್ದು ಯಾವಾಗ, ಕೆಲಸ ಪ್ರಾರಂಭವಾಗಿದೆಯೇ; ಮುಖ್ಯ ಮಂತ್ರಿಗಳು 3 ವರ್ಷಗಳಲ್ಲಿ ಹಂತ ಹಂತವಾಗಿ ಯೋಜನೆ ಪೂರ್ಣಗೊಳಿಸಲಾಗುವುದು ಎಂಬ ಆಶ್ವಾಸನೆ ನೀಡಿರುವುದು ನಿಜವೇ, ಹಾಗಿದ್ದಲ್ಲಿ ಈ ಯೋಜನೆ ಯಾವ ಹಂತದಲ್ಲಿದೆ?

ಆ) ವಾಗ್ದಾನದ ಪ್ರಕಾರ ಪ್ರಥಮ ಹಂತದ ಹಣ ಬಿಡುಗಡೆಯಾಗಿದೆಯೇ

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು) :

ಅ) 31-10-1992 ರಲ್ಲಿ ಮಂಜೂರಾಗಿದೆ. ಕೆಲಸ ಪ್ರಾರಂಭವಾಗಿಲ್ಲ ಯೋಜನೆಯನ್ನು ಶೀಘ್ರದಲ್ಲಿ ಪ್ರಾರಂಭ ಮಾಡಲಾಗುತ್ತದೆ

ಆ) ಘಟಪ್ರಭಾ ಯೋಜನೆ ಮೂರನೇ ಹಂತಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಈ ಯೋಜನೆಯ ವೆಚ್ಚವನ್ನು ಭರಿಸಲಾಗುವುದು